ಬೆಂಗಳೂರು ಡಿಸ್ಟ್ರಿಕ್ಟು.

ಬೆಂಗಳೂರು ಸಬ್ ಜಡ್ಜೀಯವರ ಕೋರ್ಟಿನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 198

ಮೃತಪಟ್ಟ ಕೊರಮರ ಮುನಿಯಪ್ಪನವರ ಆಸ್ತೀ ವಿಷಯದಲ್ಲಿ—

ಕಾನಕಾನಹಳ್ಳಿ ತಾಲ್ಲೂಕು ಸೋಮನಹಳ್ಳಿ ಹೋಬಳಿ ಗುಳಕಮಲೆ ಗ್ರಾಮದಲ್ಲಿರುವ ಅರ್ಜಿದಾರರು 1ನೇ ಚಿಕ್ಕ ಮುನಿಯಪ್ಪ 2ನೇ ವೆಂಕಟಮ್ಮ, ಮೃತಪಟ್ಟ ಸದರೀ ಮುನಿಯಪ್ಪನವರಿಗೆ ಚಿಕ್ಕ ಮುನಿಯಪ್ಪ ಮಗ ವೆಂಕಟಮ್ಮ 3ನೇ ಪಿಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಗುಳಕಮಲೆ ಸ್ಥಳದ ಮುನಿಯಪ್ಪ—ವೆಂಕಟಮ್ಮ ಇವರು ಡಿಪೋ ವಾಸಸ್ಥರಾಗಿ ಮೃತಪಟ್ಟ ಮುನಿಯಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೈಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮುನಿಯಪ್ಪ ವೆಂಕಟಮ್ಮ ಇವರ ಅರ್ಜೀಯನ್ನು 1887ನೇ ಇಸವಿ ಏಪ್ರೆಲ್ ತಿಂಗಳು ತಾರೀಖು 1ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮುನಿಯಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂತ ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಮಾರ್ಚೀ ತಿಂಗಳು 10ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಂದ ನಮ್ಮ ದಸ್ತಖತ್ತಿನಿಂದ ಕೊಡೋಣಾಗಿದೆ.

1887ನೇ ಇಸವಿ ಮಿಸಲೀನಿಯಸ್ ಅರ್ಜೀ ನಂಬರ್ 240.

ಮೃತಪಟ್ಟ ಬೆಂಗಳೂರಲ್ಲಿರುವ ಲೇಟ್ ಅರಕಾಟ್ ಗೋಪಾಲಾಚಾರ್ಯರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಲಕ್ಷ್ಮಣಾಚಾರು ಮೃತಪಟ್ಟ ಸದರೀ ಗೋಪಾಲಾಚಾರ್ಯರಿಗೆ ತಮ್ಮ ಆಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ಸ್ಥಳದ ಲಕ್ಷ್ಮಣಾಚಾರ್ಯರು ಸದರೀ ವಾಸಸ್ಥರಾಗಿ ಮೃತಪಟ್ಟ ಗೋಪಾಲಾಚಾರ್ಯರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಲಕ್ಷ್ಮಣಾಚಾರ್ಯರ ಅರ್ಜಿಯನ್ನು 1887ನೇ ಇಸವಿ ಏಪ್ರೆಲ್ ತಿಂಗಳು ತಾರೀಖು 1ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಗೋಪಾಲಾಚಾರ್ಯರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ

1887ನೇ ಇಸವಿ ಮಾರ್ಚೀ ತಿಂಗಳು 15ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಂದ ನಮ್ಮ ದಸ್ತಖತ್ತಿನಿಂದ ಕೊಡೋಣಾಗಿದೆ.

ಸ್ಯ 1887ನೇ ಇಸವಿ ಮಿಸಲೀನಿಯಸ್ ನಂಬರ್ 241.

ಮೃತಪಟ್ಟ ರಂಗಪ್ಪನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರು ಮಾಲೂರು ತಾಲ್ಲೂಕು ಮಾಸ್ತಿಲಿ ಯಿರುವ ಸೂರಪ್ಪ, ಮೃತಪಟ್ಟ ಸದರೀ ರಂಗಪ್ಪನವರಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಮಾಲೂರು ತಾಲ್ಲೂಕು ಮಾಸ್ತಿ ಸ್ಥಳದ ಸೂರಪ್ಪನವರು ಸದರೀ ವಾಸಸ್ಥರಾಗಿ ಮೃತಪಟ್ಟ ರಂಗಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡಿಕೊಳ್ಳುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿಯಿರುತ್ತಾರೆ.

ಸದರೀ ದರಖಾಸ್ತುದಾರರಾದ ಸೂರಪ್ಪನವರ ಅರ್ಜೀಯನ್ನು 1887ನೇ ಇಸವಿ ಏಪ್ರೆಲ್ ತಿಂಗಳು ತಾರೀಖು 1ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರಂಗಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಯಿದೆ.

1887ನೇ ಇಸವಿ ಮಿಸಲೀನಿಯಸ್ ನಂಬರ್ 242.

ಮೃತಪಟ್ಟ ಪೂಜಾರಿ ಮಲ್ಲಂಣನವರ ಆಸ್ತಿ ವಿಷಯದಲ್ಲಿ—

ಅರ್ಜೀದಾರು ನಂಜುಂಡ ಮೈನರ್ ಗಾರ್ಡಿಯರ್ ಮುನಿಯಪ್ಪ ಮೃತಪಟ್ಟ ಸದರೀ ಮಲ್ಲಂಣನವರ ದತ್ತು ಮಗನಿಗೆ ಗಾರ್ಡಿಯರ್ ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಕುರಬರಪೇಟೆ ಸ್ಥಳದ ಮುನಿಯಪ್ಪನವರು ಸದರೀ ವಾಸಸ್ಥರಾಗಿ ಮೃತಪಟ್ಟ ಮಲ್ಲಂಣನವ

ರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮುನಿಯಪ್ಪನವರ ಅರ್ಜೀಯನ್ನು 1887ನೇ ಇಸವಿ ಏಪ್ರೆಲ್ ತಿಂಗಳು ತಾರೀಖು 1ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮಲ್ಲಂಣನವರ ಆಸ್ತಿಗೆ ಹಕ್ಕು ದಾರರಾದ ವಿಸಿಷ್ಟರೂ ಈ ಕೋರ್ಟನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1887ನೇ ಇಸವಿ ಮಾರ್ಚೀ ತಿಂಗಳು 14ನೇ ತಾರೀಖಿನಲ್ಲಿ ಕೋರ್ಟು ಮೊಹರ್ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

1887ನೇ ಇಸವಿ ಮಿ॥ ಅರ್ಜೀ ನಂಬರ್ 243.

ಮೃತಪಟ್ಟ ಮುನಿಮಲ್ಲಂಣನ ಆಸ್ತಿ ವಿಷಯದಲ್ಲಿ—

ಅರ್ಜೀದಾರು ಮರಿಯಪ್ಪನವರು ಮೃತಪಟ್ಟಸದರೀ ಮುನಿಮಲ್ಲಂಣನವರಿಗೆ ತಮ್ಮಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ಕುರುಬರ ಪೇಟೆ ಸ್ಥಳದ ನೀಲಿಮಲ್ಲಣನವರ ಮಗ ಮರಿಯಪ್ಪನವರು ಬೆಂಗಳೂರು ವಾಸಸ್ಥರಾಗಿ ಮೃತಪಟ್ಟ ಮುನಿಮಲ್ಲಂಣನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಮರಿಯಪ್ಪನವರ ಅರ್ಜಿಯನ್ನು 1887ನೇ ಇಸವಿ ಏಪ್ರೆಲ್ ತಿಂಗಳು ತಾರೀಖು 1ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಮುನಿಮಲ್ಲಂಣನ ಆಸ್ತಿಗೆ ಹಕ್ಕು ದಾರರಾದ ವಿಸಿಷ್ಟರೂ ಈ ಕೋರ್ಟನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

ಸ್ ೯ 1887ನೇ ಇಸವಿ ಮಾರ್ಚೀ ತಿಂಗಳು 15ನೇ ತಾರೀಖಿನಲ್ಲಿ ಕೋರ್ಟು ಮೊಹರ್ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

1887ನೇ ಇಸವಿ ಮಿಸಲೀನಿಯಸ್ ನಂಬರ್ 244.

ಮೃತಪಟ್ಟ ಪುಟ್ಟಯ್ಯನ ರುದ್ರಪ್ಪನವರ ಆಸ್ತಿ ವಿಷಯದಲ್ಲಿ—

ಅರ್ಜಿದಾರು ಬೆಂಗಳೂರು ಚಿಕ್ಕಪೇಟೇಲಿರುವ ಘವತಿ ಪುಟ್ಟಯ್ಯನ ರುದ್ರಪ್ಪನವರ ಮಗಳು ವೀರಮ್ಮ, ಮೃತಪಟ್ಟ ಸರರೀ ಪುಟ್ಟಯ್ಯನ ರುದ್ರಪ್ಪನವರಿಗೆ ಮಗಳಾಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ಚಿಕ್ಕಪೇಟೆ ಸ್ಥಳದ ವೀರಮ್ಮನು ಸದರೀ ವಾಸಸ್ಥರಾಗಿ ಮೃತಪಟ್ಟು ಪುಟ್ಟಯ್ಯನ ರುದ್ರಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ವೀರಮ್ಮನ ಅರ್ಜಿಯನ್ನು 1887ನೇ ಇಸವಿ ಮಾರ್ಚಿ ತಿಂಗಳು ತಾರೀಖು 31ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪುಟ್ಟಯ್ಯನ ರುದ್ರಪ್ಪನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1887ನೇ ಇಸವಿ ಮಾರ್ಚೀ ತಿಂಗಳು 14ನೇ ತಾರೀಖಿನಲ್ಲಿ ಕೋರ್ಟು ಮೊಹರ್ನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಸಿ. ಕೈಸ್,
ಸಬ್ ಜಡ್ಜ್.

ತಾರೀಖು 2ನೇ ಮಾರ್ಚೀ 1887.

ಡಿಸ್ಟ್ರಿಕ್ಟು ಮಜಕೂರು ದೊಡ್ಡಬಳ್ಳಾಪುರ ತಾಲ್ಲೂಕು ಸಬ್ ರಿಜಿಸ್ಟ್ರಾರ್ ಆಫಿಸಿನಲ್ಲಿ ಇವರ ಕೆಳಗೆ ನಮೂದಿಸಿರುವ ಜೇವಾರಸ್ ದಸ್ತಾವೇಜನ್ನ ಕ್ರಮಪ್ರಕಾರ ವಾರಸಿದಾರ್ರಾಗಲಿ ಅಥವಾ ಅಧಿಕಾರ ಹೊಂದಿದ ಮುತಾಲೀಕರಾಗಲಿ ಈ ತಾರೀಖು ಲಾಗಾಯತು ಎಂದು ತಿಂಗಳೊಳಗಾಗಿ ಹಾಜರಾಗಿ ವಾಪಸಿ ಪಡಿಯಬೇಕು, ತಪ್ಪಿದಲ್ಲಿ ರಿಜಿಸ್ಟ್ರೇಷ್ಯ ಆಕ್ಟು 85ನೇ ಸೆಕ್ಷಿಯ ಮೇರೆ ನಾಶಪಡಿಸಲ್ಪಡುತ್ತೆ.